ಕರ್ನಾಟಕ ವಿಧಾನ ಪರಿಷತ್ತು

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	679
2.	ಸದಸ್ಯರ ಹೆಸರು	:	ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆ ಕ್ಷೇತ್ರದಿಂದ ಚುನಾಯಿತರಾದವರು)
3.	ಉತ್ತರಿಸುವ ದಿನಾಂಕ	:	04-03-2021
4.	ಉತ್ತರಿಸುವವರು	:	ಮುಖ್ಯಮಂತ್ರಿಗಳು

ಕ್ರಸಂ	ಪ್ರಶ್ನೆ	ಉತ್ತರ
ಅ	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಸವನ್ನು ವಿಲೇವಾರಿ ಮಾಡಲು ಎಂದಿನಿಂದ ಗುತ್ತಿಗೆಯನ್ನು ನೀಡಲಾಗಿದೆ; ಗುತ್ತಿಗೆಯ ಅವಧಿಯು ಮುಗಿದಿದೆಯೇ; ಅದೇ ಗುತ್ತಿಗೆದಾರರನ್ನು ಮುಂದುವರೆಸಲು ನಿಯಮಗಳಲ್ಲಿ ಅವಕಾಶವಿದೆಯೇ; ಇಲ್ಲವಾದಲ್ಲಿ, ನಿಯಮ ಉಲ್ಲಂಘಿಸಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ;	ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಸವನ್ನು ವಿಲೇವಾರಿ ಮಾಡುವ ಗುತ್ತಿಗೆಯನ್ನು 2013 ರಲ್ಲಿ ನೀಡಲಾಗಿರುತ್ತದೆ. ಪ್ರಸ್ತುತ ಗುತ್ತಿಗೆ ಅವಧಿಯು ಮುಗಿದಿರುತ್ತದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಸವನ್ನು ವಿಲೇವಾರಿ ಮಾಡುವ ಗುತ್ತಿಗೆ ಅವಧಿ ಮುಗಿದ ನಂತರ ಅದೇ ಗುತ್ತಿಗೆದಾರರನ್ನು ಮುಂದುವರೆಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. ಈ ತರಹದ ಯಾವುದೇ ಪ್ರಕರಣಗಳು ಕಂಡುಬಂದಲ್ಲಿ ಸಂಬಂಧಿಸಿದ ಅಧಿಕಾರಿಗಳ ಮೇಲೆ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ.
ಆ	ದಿನಾಂಕ: 01.01.2018 ರಿಂದ 30.11.2020 ರವರೆಗೆ ಕಸ ಸಂಗ್ರಹಣಾ ಕೇಂದ್ರಕ್ಕೆ ಪ್ರತಿ ದಿನ ಯಾವ ವಾಹನದಲ್ಲಿ ಎಷ್ಟು ಟನ್ ಕಸವು ಬಂದಿದೆ; ತೂಕವನ್ನು ಪರಿಶೀಲಿಸ ಲಾಗಿದೆಯೇ; (ದಿನಾಂಕ, ಪ್ರತಿ ವಾಹನದ ತೂಕದ ರಸೀದಿ ವಿವರ, ವಾಹನದ ಮಾದರಿ, ವಾಹನಗಳ ಸಂಖ್ಯೆ, ತೂಕ ಪರಿಶೀಲಿಸಿದ ಸಿಬ್ಬಂದಿಯ ಹೆಸರು, ದಿನಾಂಕವಾರು ಸಂಪೂರ್ಣ ವಿವರ ನೀಡುವುದು).	ದಿನಾಂಕ: 01.01.2018 ರಿಂದ 30.11.2020 ರವರೆಗೆ ಕಸ ಸಂಸ್ಕರಣಾ ಘಟಕಕ್ಕೆ ಹಾಗೂ ವೈಜ್ಞಾನಿಕ ಭೂಭರ್ತಿ ಘಟಕಕ್ಕೆ ದಿನಾಂಕವಾರು ಪ್ರತಿದಿನದ ವಾಹನದ ತೂಕ, ವಾಹನದ ಮಾದರಿ, ತೂಕ ಪರಿಶೀಲನೆ ಮಾಡಿರುವ ಕಸ ವಿಲೇವಾರಿ ವಿವರಗಳು ಅಗಾಧವಾಗಿ ಸುಮಾರು 6,000 ಪುಟಗಳಷ್ಟಿದ್ದು, ಸದರಿ ವಿವರಗಳನ್ನು <u>**ಅನುಬಂಧ-1**</u> ರಲ್ಲಿ ಅಳವಡಿಸಿ, ಸದರಿ ಮಾಹಿತಿಯನ್ನು ಸಿ.ಡಿ.ಯಲ್ಲಿ (Compact Disk) ನೀಡಲಾಗಿದೆ.
ಇ	ಕಸ ಸಂಗ್ರಹಣಾ ಕೇಂದ್ರದಲ್ಲಿರುವ ವೇ-ಬ್ರಿಡ್ಜ್‌ನ ನಿರ್ವಹಣೆಯನ್ನು ಪಾಲಿಕೆ ನಿರ್ವಹಿಸುತ್ತಿದೆಯೇ; ಅಥವಾ ಗುತ್ತಿಗೆದಾರರು ನಿರ್ವಹಿಸುತ್ತಾರೆಯೇ; ಇದು ಪ್ರತಿ ವರ್ಷ ತೂಕ ಮತ್ತು ಅಳತೆ ಇಲಾಖೆಯ ತಪಾಸಣೆಗೆ ಒಳಪಟ್ಟಿದೆಯೇ; (ವಿವರಗಳನ್ನು ಒದಗಿಸುವುದು)	ಕಸ ಸಂಗ್ರಹಣಾ ಕೇಂದ್ರದಲ್ಲಿರುವ ವೇ-ಬ್ರಿಡ್ಜ್‌ನ ನಿರ್ವಹಣೆಯನ್ನು ಪಾಲಿಕೆ ವತಿಯಿಂದ ನಿರ್ವಹಿಸಲಾಗುತ್ತಿದೆ. ಕಸ ಸಂಸ್ಕರಣಾ ಘಟಕಗಳಾದ ಕನ್ನಹಳ್ಳಿ, ಸೀಗೆಹಳ್ಳಿ, ಸುಬ್ಬರಾಯನಪಾಳ್ಯ, ಲಿಂಗಧೀರನಹಳ್ಳಿ, ಚಿಕ್ಕನಾಗಮಂಗಲ ಹಾಗೂ ದೊಡ್ಡಬಿದರಕಲ್ಲು ಸಂಸ್ಕರಣಾ ಘಟಕಗಳನ್ನು 2015-16ನೇ ಸಾಲಿನಲ್ಲಿ ನಿರ್ಮಿಸಿದ್ದು, ಆ ಸಮಯದಲ್ಲಿ

		ವೇ–ಬ್ರಿಡ್ಜ್‌ಗಳನ್ನು ಸ್ಥಾಪಿಸಲಾಗಿರುತ್ತದೆ. ಕೆ.ಸಿ.ಡಿ.ಸಿ. ಸಂಸ್ಕರಣಾ ಘಟಕದಲ್ಲಿನ ವೇ–ಬ್ರಿಡ್ಜ್ ದಿನಾಂಕ: 01.10.2020 ರಲ್ಲಿ ತೂಕ ಮತ್ತು ಅಳತೆ ಇಲಾಖಾ ವತಿಯಿಂದ ತಪಾಸಣೆಗೆ ಒಳಪಟ್ಟಿರುತ್ತದೆ. ವಿವರಗಳನ್ನು **ಅನುಬಂಧ–2 ರಲ್ಲಿ** ಅಳವಡಿಸಿ, ಸದರಿ ಮಾಹಿತಿಯನ್ನು ಸಿ.ಡಿ.ಯಲ್ಲಿ (Compact Disk) ನೀಡಲಾಗಿದೆ.
ಈ	ಕಸ ಸಂಗ್ರಹಣೆ ಹಾಗೂ ವಿಲೇವಾರಿ ಸರಿಯಾದ ರೀತಿಯಲ್ಲಿ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?	ಬೆಂಗಳೂರಿನ ನಾಗರೀಕರಿಗೆ ಉತ್ತಮ ಜನಾರೋಗ್ಯವನ್ನು ಒದಗಿಸಲು ನಗರದ ಸ್ವಚ್ಛತೆಯನ್ನು ಕಾಪಾಡುವುದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಜವಾಬ್ದಾರಿಯಾಗಿರುತ್ತದೆ. ಪಾಲಿಕೆ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುತ್ತಿರುವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ ವಿಲೇವಾರಿ ಮಾಡುವುದು ಸಾರ್ವಜನಿಕರ ಆರೋಗ್ಯ ಮತ್ತು ಸ್ವಚ್ಛತೆಯನ್ನು ಕಾಪಾಡುವ ಹಿತದೃಷ್ಟಿಯಿಂದ ಪಾಲಿಕೆಯ ಆದ್ಯ ಕರ್ತವ್ಯವಾಗಿರುತ್ತದೆ. ನಗರದಲ್ಲಿ ಪ್ರತಿದಿನ 4,500 ಮೆಟ್ರಿಕ್ ಟನ್‌ಗಳಷ್ಟು ಘನತಾಜ್ಯ ಉತ್ಪತ್ತಿಯಾಗುತ್ತಿರುತ್ತದೆ. ಈ ಘನತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಗ್ರಹಣೆ, ಸಾಗಾಣಿಕೆ, ಸಂಸ್ಕರಣೆ ಮತ್ತು ವಿಲೇವಾರಿ ಮಾಡುವ ಕಾರ್ಯವನ್ನು ದೊಡ್ಡ ಪ್ರಮಾಣದಲ್ಲಿ ಸೂಕ್ತವಾಗಿ ನಿರ್ವಹಿಸಲಾಗುತ್ತಿರುತ್ತದೆ. ಬೆಂಗಳೂರು ನಗರವು ಕಾಸ್ಮೋಪಾಲಿಟನ್ ನಗರವಾಗಿ ಪರಿವರ್ತನೆಗೊಂಡಿದ್ದು, ಈ ಬೃಹತ್ ಪ್ರಮಾಣದ ಕಸ ಸಂಗ್ರಹಣೆ ಮತ್ತು ವಿಲೇವಾರಿ ಮಾಡುವ ಸಮಯದಲ್ಲಿ ಸಾರ್ವಜನಿಕರಿಂದ ದೂರುಗಳು ಆಗಿಂದಾಗ್ಗೆ ಬರುತ್ತಿರುವ ಮೇರೆಗೆ ಬೆಂಗಳೂರು ನಗರದ ನಿವಾಸಿಗಳ ಅನುಕೂಲಕ್ಕಾಗಿ ಘನತ್ಯಾಜ್ಯ ನಿರ್ವಹಣೆಗೆ ಸಂಬಂಧಪಟ್ಟ ದೂರಗಳನ್ನು ದಾಖಲಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲು ಹಾಗೂ ಪಾಲಿಕೆ ವತಿಯಿಂದ ಕೂಡಲೇ ಸದರಿ ದೂರಿಗೆ ಸ್ಪಂದಿಸಿ ಘನತ್ಯಾಜ್ಯ ವಿಲೇವಾರಿಯನ್ನು ಕೈಗೊಳ್ಳಲು **"ಸಹಾಯ ಆಪ್"** ಅನ್ನು ಬಿಡುಗಡೆ ಮಾಡಲಾಗಿರುತ್ತದೆ.

		ಪ್ರಸ್ತುತ ಬೆಂಗಳೂರು ನಗರದಲ್ಲಿ ಪ್ರತಿನಿತ್ಯ ಸದರಿ **"ಸಹಾಯ ಆಪ್"** ನಲ್ಲಿ ದೂರುಗಳು ದಾಖಲಾಗುತ್ತಿದ್ದು, ಸದರಿ ದೂರುಗಳಿಗೆ ಪಾಲಿಕೆಯು ಕೂಡಲೇ ಸ್ಪಂದಿಸಿ, ದೂರುಗಳನ್ನು ಪರಿಹರಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ. ಪಾಲಿಕೆಯಲ್ಲಿ ಘನತ್ಯಾಜ್ಯ ನಿರ್ವಹಣೆ ಕುರಿತಂತೆ ಪ್ರತ್ಯೇಕವಾದ ಕೋಶವಿದ್ದು, ಸದರಿ ಕೋಶದಿಂದ ಪ್ರತಿನಿತ್ಯದ ಘನತ್ಯಾಜ್ಯ ವಿಲೇವಾರಿ ಕಾಮಗಾರಿಯನ್ನು ಸಮರ್ಪಕವಾಗಿ ನಿರ್ವಹಿಸಲು ಎಲ್ಲಾ ತರಹದ ಕ್ರಮವನ್ನು ಬಿಬಿಎಂಪಿ ವತಿಯಿಂದ ಕೈಗೊಳ್ಳಲಾಗಿರುತ್ತದೆ.

ಸಂಖ್ಯೆ: ನಅಇ 57 ಎಂಎನ್‌ವೈ 2021 (ಇ)

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್. ಯಡಿಯೂರಪ್ಪ)

ಮುಖ್ಯಮಂತ್ರಿ